**Bangalore**
**Regional News**
**05.08.2024 / 14.30 hrs**
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

೧. ಬೆಂಗಳೂರು ಕೆಫೆ ಸ್ಫೋಟ ಪ್ರಕರಣ; ಘಟನಾ ಸ್ಥಳಕ್ಕೆ ಶಂಕಿತ ಭಯೋತ್ಪಾದಕರನ್ನು ಕರೆತಂದು ಸ್ಥಳ ಮಹಜರು

೨. ಮೂಡಾ ಹಗರಣ; ಮೂರನೇ ದಿನಕ್ಕೆ ಕಾಲಿಟ್ಟ ಬಿಜೆಪಿ-ಜೆಡಿಎಸ್ ನೇತೃತ್ವದ ಮೈಸೂರು ಚಲೋ ಪಾದಯಾತ್ರೆ

೩. ವಾಲ್ಮೀಕಿ ನಿಗಮ ಹಗರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಕೈಗೊಂಬೆಯಂತೆ ಎಸ್ಐಟಿ ಕೆಲಸ- ವಿರೋಧ ಪಕ್ಷದ ನಾಯಕ ಆರ್.ಅಶೋಕ ಆರೋಪ

೪. ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ತಮ್ಮ ಸಹೋದರರ ಆಸ್ತಿಯ ವಿವರ ನೀಡುವಂತೆ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಆಗ್ರಹ

೫. ಪ್ಯಾರಿಸ್ ಒಲಿಂಪಿಕ್ಸ್; ಬ್ಯಾಡ್ಮಿಂಟನ್‌ನಲ್ಲಿ ಕಂಚಿನ ಪದಕ್ಕಾಗಿ ಭಾರತದ ಲಕ್ಷ್ಯಸೇನ್-ಮಲೇಷಿಯಾದ ಜಿಯಾ ನಡುವೆ ಸೆಣಸಾಟ

**<><*<><>*><>**

ಬೆಂಗಳೂರು ಕೆಫೆ ಸ್ಫೋಟ ಪ್ರಕರಣಕ್ಕೆ ಸಂಬಂಧಿಸಿದಂತೆ ಶಂಕಿತ ಭಯೋತ್ಪಾದಕರನ್ನು ರಾಷ್ಟ್ರೀಯ ಗುಪ್ತಚರ ಸಂಸ್ಥೆ -ಎನ್ಐಎ ಇಂದು ಘಟನಾ ಸ್ಥಳಕ್ಕೆ ಕರೆತಂದು, ಮಹಜರು ಪ್ರಕ್ರಿಯೆ ನಡೆಸಿದೆ. ಏಪ್ರಿಲ್ ೧ ರಂದು ಸ್ಫೋಟ ಸಂಭವಿಸಿದ ಬೆಂಗಳೂರಿನ ಕೆಫೆಯ ಸುತ್ತಲೂ ೫ಂಕ್ಕೂ ಹೆಚ್ಚು ಪೊಲೀಸರು ಮತ್ತು ಅಧಿಕಾರಿಗಳ ಬಿಗಿಬಂದೋಬಸ್ತ್ ನಡುವೆ, ಘಟನಾ ಸ್ಥಳದ ಮಹಜರು ನಡೆಸಲಾಗಿದ್ದು, ಸಾರ್ವಜನಿಕರ ಸಂಚಾರವನ್ನು ರದ್ದುಗೊಳಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಪೊಲೀಸ್ ಮೂಲಗಳ ಪ್ರಕಾರ, ಘಟನೆ ನಡೆದ ಐದು ತಿಂಗಳ ನಂತರ ಎನ್ಐಎ, ಏಪ್ರಿಲ್ ೧೨ ರಂದು ಬಂಧಿಸಿದ್ದ ಶಂಕಿತ ಭಯೋತ್ಪಾದಕ ಮುಸ್ಸಾವಿರ್ ಹುಸೇನ್ ಶಾಜಿಬ್ ಮತ್ತು ರೂವಾರಿ ಅಬ್ದುಲ್ ಮಥೀನ್ ತಾಹಾ ಅವರನ್ನು ಕೆಫೆಗೆ ಕರೆತರಲಾಗಿದೆ.

**<><*<><>*><>**

ವಾಲ್ಮೀಕಿ ಅಭಿವೃದ್ಧಿ ನಿಗಮದ ಹಗರಣಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಪ್ರಶ್ನೆಗಳನ್ನು ಕೇಳಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ದೇವನಹಳ್ಳಿ ಬಳಿಯ ಖಾಸಗಿ ಹೋಟೆಲ್ ಒಂದರಲ್ಲಿ ಮಾಜಿ ಸಚಿವ ನಾಗೇಂದ್ರ ಅವರು ನಿಗಮದ ಎಲ್ಲ ಅಧಿಕಾರಿಗಳನ್ನು ಕರೆದು, ಯಾವುದೇ ಕಾರಣಕ್ಕೂ ತಮ್ಮ ಹೆಸರನ್ನು ಹೇಳದಂತೆ ಎಚ್ಚರಿಕೆ ನೀಡಿದ್ದು, ಸತ್ಯವಲ್ಲವೇ? ಎಂದು ಪ್ರಶ್ನಿಸಿದ್ದಾರೆ. ಎಚ್.ಡಿ.ರೇವಣ್ಣ ಅವರ ಕುಟುಂಬ ಸದಸ್ಯರ ಮೇಲೆ ಬಂದಿರುವ ಆರೋಪಕ್ಕೆ ಸಂಬಂಧಿಸಿದಂತೆ ಆತುರದಲ್ಲಿ ಎಸ್ಐಟಿ ರಚನೆ ಮಾಡಿ, ವಿಚಾರಣೆ ನಡೆಸಿ, ನ್ಯಾಯಾಂಗ ಬಂಧನಕ್ಕೂ ಕಳಹಿಸಲಾಗಿದೆ. ಆದರೆ ಇದೇ ಆಸಕ್ತಿ ವಾಲ್ಮೀಕಿ ನಿಗಮದ ಹಗರಣದಲ್ಲಿ ಏಕೆ ತೋರಿಸುತ್ತಿಲ್ಲ? ಎಂದು ಪ್ರಶ್ನಿಸಿದ್ದಾರೆ. ಎಸ್ಐಟಿ ತಮ್ಮ ಕೈಗೊಂಬೆ ಎನ್ನುವುದಕ್ಕೆ ಪರಶುರಾಮ್ ಮತ್ತು ಪದ್ಮನಾಭ್ ಅವರ ನಡುವೆ ನಡೆದಿರುವ ಫೋನ್ ಸಂಭಾಷಣೆಯೇ ಸಾಕ್ಷಿ ಎಂದು ಸಿದ್ದರಾಮಯ್ಯ ಅವರ ವಿರುದ್ಧ ಆರೋಪಿಸಿದ್ದಾರೆ. ಎಸ್ಐಟಿ ಮೇ ೨೧ ರಂದು ರಚನೆಯಾಗಿ ೪೦ ದಿನ ಕಳೆದರೂ ಮಾಜಿ ಸಚಿವ ನಾಗೇಂದ್ರ, ಶಾಸಕ ಬಸವರಾಜ ದದ್ದಲ್ ಅವರನ್ನು ವಿಚಾರಣೆ ನಡೆಸಿರಲಿಲ್ಲ. ಕನಿಷ್ಠ ನೋಟಿಸ್ ಕೂಡ ನೀಡಿರಲಿಲ್ಲ. ಎಸ್ಐಟಿ ರಚಿಸಿದ್ದೇ ಈ ಹಗರಣ ಮುಚ್ಚಿಹಾಕಲು ಎಂದು ಆರ್.ಅಶೋಕ್ ದೂರಿದ್ದಾರೆ.

<><*<><>*><>

ತಮ್ಮ ಕುಟುಂಬದ ಎಲ್ಲಾ ಆಸ್ತಿಗಳ ಲೆಕ್ಕ ನೀಡಲು ಸಿದ್ಧ ಆದರೆ, ಅದಕ್ಕೂ ಮುನ್ನ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರು ತಮ್ಮ ಸಹೋದರನ ಆಸ್ತಿಯ ಲೆಕ್ಕ ನೀಡಲಿ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸವಾಲೆಸೆದಿದ್ದಾರೆ. ಬೆಂಗಳೂರಿನಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರಜಾಪ್ರಭುತ್ವದಲ್ಲಿ ಪ್ರಶ್ನಿಸುವ ಹಕ್ಕು ಎಲ್ಲರಿಗೂ ಇದೆ. ತಮ್ಮ ಸಹೋದರನ ಆಸ್ತಿ ಬಗ್ಗೆ ಎಚ್.ಡಿ.ಕುಮಾರಸ್ವಾಮಿ ಮೊದಲು ಉತ್ತರ ನೀಡಲಿ. ತಮ್ಮ ಹಗರಣಗಳ ಕುರಿತು ಉತ್ತರ ನೀಡುವಂತೆ ಜೆಡಿಎಸ್, ಬಿಜೆಪಿ ಯವರಿಗೆ ಕೇಳಿದರೂ ಇದುವರೆಗೂ ಅವರು ಉತ್ತರ ನೀಡಲಿಲ್ಲ. ಇದಕ್ಕಾಗಿ ಜನಾಂದೋಲನ ಸಭೆ ನಡೆಸುತ್ತಿದ್ದೇವೆ ಎಂದು ಹೇಳಿದರು. ಕೇಂದ್ರ ಸರ್ಕಾರದಿಂದ ಕರ್ನಾಟಕದ ಪಾಲಿನ ಅನುದಾನ ಬಿಡುಗಡೆ ಆಗಿಲ್ಲ ಎಂದು ಡಿ.ಕೆ.ಶಿವಕುಮಾರ್ ಇದೇ ವೇಳೆ ಆರೋಪಿಸಿದರು.

<><*<><>*><>

ಕೇಂದ್ರ ಸರ್ಕಾರ ರಾಜ್ಯಕ್ಕೆ ಸರಿಯಾಗಿ ಅನುದಾನ ನೀಡದೆ ಅನ್ಯಾಯ ಮಾಡುತ್ತಿದ್ದು, ಇದನ್ನು ಮುಚ್ಚಿಹಾಕಲು ಬಿ.ಜೆ.ಪಿ ಮತ್ತು ಜೆ.ಡಿ.ಎಸ್ ಪಾದಯಾತ್ರೆ ನಡೆಸುತ್ತಿವೆ ಎಂದು ಕಂದಾಯ ಸಚಿವ ಕೃಷ್ಣ ಬೈರೆಗೌಡ ಆರೋಪಿಸಿದ್ದಾರೆ. ಚಿಕ್ಕಮಗಳೂರು ಜಿಲ್ಲೆಯ ನೆರೆ ಪೀಡಿತ ಪ್ರದೇಶಗಳ ಭೇಟಿಗೂ ಮುನ್ನ ಮಾತನಾಡಿದ ಅವರು, ಕೇಂದ್ರದ ಸಚಿವರು ರಾಜ್ಯಕ್ಕೆ ಹೆಚ್ಚಿನ ಅನುದಾನ ತರುವುದು ಬಿಟ್ಟು ಮುಡಾ ಹಗರಣದ ಬಗ್ಗೆ ಪಾದಯಾತ್ರೆ ಹೊರಟಿದ್ದಾರೆ. ಇದ್ದರಿಂದ ಕರ್ನಾಟಕಕ್ಕೆ ಯಾವುದೇ ಲಾಭವಿಲ್ಲ. ಬಿಜೆಪಿ, ಜೆಡಿಎಸ್ ನಾಯಕರು ರಾಜ್ಯದ ಜನರ ಸಮಸ್ಯೆಗಳನ್ನು ಬಗೆಹರಿಸುವತ್ತ ಗಮನ ಹರಿಸಲಿ ಎಂದು ಹೇಳಿದ್ದಾರೆ.

<><*<><>*><>

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕಳೆದ ಮೂರು ವಾರಗಳಿಂದ ಆರ್ಭಟಿಸಿದ ಮಳೆ ಕೊಂಚ ಇಳಿಮುಖವಾಗಿದೆ. ಜಿಲ್ಲೆಯಲ್ಲಿ ಸತತವಾಗಿ ಸುರಿದ ಮಳೆಯಿಂದಾಗಿ ಎಪ್ರಿಲ್ ೧ರಿಂದ ಜುಲೈ ೪ ರ ವರೆಗೆ ಒಟ್ಟು ೬೭೮ ಮನೆಗಳಿಗೆ ಹಾನಿಯಾಗಿದೆ. ಈ ಪೈಕಿ ೧೬೬ ಮನೆಗಳು ಸಂಪೂರ್ಣ ಮತ್ತು ೫೧೨ ಮನೆಗಳಿಗೆ ಭಾಗಶಃ ಹಾನಿಯಾಗಿದೆ ಎಂದು ಜಿಲ್ಲಾಡಳಿತ ಮಾಹಿತಿ ನೀಡಿದೆ. ಭಾರೀ ಮಳೆಯ ಕಾರಣದಿಂದ ಅವಘಡ ಸಂಭವಿಸಿ ೧೧ ಮಂದಿ ಸಾವನ್ನಪ್ಪಿದ್ದು, ೮ ಮಂದಿ ಗಾಯಗೊಂಡಿದ್ದಾರೆ. ನಿರಂತರ ಮಳೆಯಿಂದಾಗಿ ಜಿಲ್ಲೆಯಲ್ಲಿ ೭.೧೯ ಹೆಕ್ಟೇರ್ ಪ್ರದೇಶದಲ್ಲಿನ ತೋಟಗಾರಿಕಾ ಬೆಳೆ ನಷ್ಟವಾಗಿದೆ. ಭಾರೀ ಗಾಳಿ ಮಳೆಯ ಪರಿಣಾಮದಿಂದಾಗಿ ೩೫ ಸೇತುವೆಗಳು ಮತ್ತು ೬ ಸಾವಿರದ ೪೮೪ ವಿದ್ಯುತ್ ಕಂಬಗಳಿಗೆ ಹಾನಿಯಾಗಿದೆ ಎಂದು ದಕ್ಷಿಣ ಕನ್ನಡ ಜಿಲ್ಲಾಡಳಿತ ತಿಳಿಸಿದೆ.

<><*<><>*><>

ಪ್ಯಾರಿಸ್ ಒಲಿಂಪಿಕ್ಸ್‌ನಲ್ಲಿಂದು ಪುರುಷರ ಬ್ಯಾಡ್ಮಿಂಟನ್‌ನ ಕಂಚಿನ ಪದಕಕ್ಕಾಗಿ ಭಾರತದ ಲಕ್ಷ್ಯ ಸೇನ್, ಮಲೇಷಿಯಾದ ಜಿ ಜಿಯಾ ಲಿ, ಅವರೊಂದಿಗೆ ಸೆಣಸಲಿದ್ದಾರೆ. ಸಂಜೆ ೬ ಗಂಟೆಗೆ ನಡೆಯಲಿರುವ ಪಂದ್ಯದಲ್ಲಿ ಅವರು ದೇಶಕ್ಕೆ ೪ನೇ ಪದಕ ತಂದುಕೊಡುವ ನಿರೀಕ್ಷೆಯಿದೆ. ಟೆಬಲ್ ಟೆನಿಸ್‌ನಲ್ಲಿ ಭಾರತೀಯ ಮಹಿಳಾ ತಂಡ ೧೬ರ ಸುತ್ತಿನ ಪಂದ್ಯದಲ್ಲಿ ರೊಮೆನಿಯಾ ತಂಡವನ್ನು ಎದುರಿಸಲಿದ್ದು, ಕ್ವಾರ್ಟರ್ ಫೈನಲ್ ಪ್ರವೇಶಿಸಲು ಪೈಪೋಟಿ ನಡೆಸಲಿದೆ. ಸ್ಕೀಟ್ ಮಿಶ್ರತಂಡ ವಿಭಾಗದಲ್ಲಿ, ಭಾರತದ ಮಹೇಶ್ವರಿ ಚೌಹಾಣ್ ಮತ್ತು ಅನಂತಜೀತ್ ಸಿಂಗ್ ನರುಕಾ ಸ್ಪರ್ಧಿಸುತ್ತಿದ್ದಾರೆ. ಶ್ರೀಜಾ ಅಕುಲಾ, ಮನಿಕಾ ಬಾತ್ರಾ ಮತ್ತು ಅರ್ಚನಾ ಕಾಮತ್ ಒಳಗೊಂಡಿರುವ ಭಾರತೀಯ ಮಹಿಳಾ ಟೇಬಲ್ ಟೆನಿಸ್ ತಂಡ ೧೬ ರ ಸುತ್ತಿನ ಪಂದ್ಯದಲ್ಲಿ ಇಂದು ಮಧ್ಯಾಹ್ನ ೧.೩೦ಕ್ಕೆ ರೊಮೇನಿಯಾವನ್ನು ಎದುರಿಸಲಿದ್ದು, ಕ್ವಾರ್ಟರ್ ಫೈನಲ್‌ನಲ್ಲಿ ಸ್ಥಾನ ಪಡೆಯುವ

ಗುರಿಯನ್ನು ಹೊಂದಿದೆ.ಅಥ್ಲೆಟಿಕ್ಸ್‌ನಲ್ಲಿ, ಮಹಿಳೆಯರ ೪೦೦ ಮೀ ೧ ಸುತ್ತಿನಲ್ಲಿ ಕಿರಣ್ ಪಹಲ್ ಸ್ಪರ್ಧಿಸಲಿದ್ದು, ಏಷ್ಯನ್ ಗೇಮ್ಸ್ ಚಿನ್ನದ ಪದಕ ವಿಜೇತ ಅವಿನಾಶ್ ಸೇಬಲ್, ೩ ಸಾವಿರ ಮೀಟರ್ ಸ್ಟೀಪಲ್‌ಚೇಸ್ ಫೈನಲ್‌ಗೆ ಅರ್ಹತೆ ಪಡೆಯಲು ಸೆಣಸಲಿದ್ದಾರೆ. ಕುಸ್ತಿಯಲ್ಲಿ, ನಿಶಾ ದಹಿಯಾ ಮಹಿಳೆಯರ ೬೮ ಕೆಜಿ ಫ್ರೀಸ್ಟೈಲ್ ಪ್ರಿ-ಕ್ವಾರ್ಟರ್‌ನಲ್ಲಿ ಭಾರತದ ಅಭಿಯಾನವನ್ನು ಆರಂಭಿಸಲಿದ್ದಾರೆ. ಸೇಲಿಂಗ್‌ನಲ್ಲಿ, ವಿಷ್ಣು ಸರವಣನ್ ಮತ್ತು ನೇತ್ರಾ ಕುಮನನ್ ಅವರು ಕ್ರಮವಾಗಿ ಪುರುಷರ ಮತ್ತು ಮಹಿಳೆಯರ ಡಿಂಗಿ ಸ್ಪರ್ಧೆಗಳಲ್ಲಿ ತಮ್ಮ ಅಭಿಯಾನವನ್ನು ಮುಂದುವರೆಸಲಿದ್ದಾರೆ. ಪ್ಯಾರಿಸ್ ೨೦೨೪ರ ಒಲಿಂಪಿಕ್ಸ್ ಸ್ಮರಣಾರ್ಥ ವಿಶೇಷ ಅಂಚೆ ಚೀಟಿಗಳನ್ನು ಕೇಂದ್ರ ಸರ್ಕಾರ ಇಂದು ಬಿಡುಗಡೆ ಮಾಡಿದೆ.

<><*<><>*><>

ಸ್ಪರ್ಧಾತ್ಮಕ ಜಗತ್ತಿನಲ್ಲಿ ಸಾಧಿಸಬೇಕಾದರೆ, ವಿದ್ಯಾರ್ಥಿಗಳಲ್ಲಿ ಕೌಶಲ್ಯ ಅಗತ್ಯ ಎಂದು ಯಾದಗಿರಿ ಹೆಚ್ಚುವರಿ ಜಿಲ್ಲಾಧಿಕಾರಿ ಶರಣಬಸಪ್ಪ ಕೋಟೆಪ್ಪಗೋಳ ಹೇಳಿದರು. ಯಾದಗಿರಿ ನಗರದ ಸರ್ಕಾರಿ ಪದವಿ ಮಹಾವಿದ್ಯಾಲಯದಲ್ಲಿ ಹಮ್ಮಿಕೊಂಡಿದ್ದ ೨೦೨೩-೨೪ನೇ ಸಾಲಿನ ಸಾಂಸ್ಕೃತಿಕ, ಕ್ರೀಡಾ, ಎನ್‌ಎಸ್‌ಎಸ್, ರೋವರ್ಸ್ ಘಟಕ, ಯುವ ರೆಡ್ ಕ್ರಾಸ್ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ವರ್ತಮಾನದ ವ್ಯವಸ್ಥೆಯಲ್ಲಿ ತೀವ್ರ ಸ್ಪರ್ಧೆ ಇದೆ. ಇದಕ್ಕೆ ವಿದ್ಯಾರ್ಥಿಗಳು ಸಜ್ಜುಗೊಳ್ಳಬೇಕಾದ ಅಗತ್ಯವಿದೆ ಎಂದರು.

<><*<><>*><>

ಸಂಕ್ಷಿಪ್ತ ಸುದ್ದಿಗಳು

೧. ಕೈಗಾರಿಕೆ, ಉದ್ಯೋಗ ಇಲಾಖೆ ಹಾಗೂ ಮಂಡ್ಯ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ಸಂಯುಕ್ತಾಶ್ರಯದಲ್ಲಿ ಮಿನಿ ಉದ್ಯೋಗ ಮೇಳವನ್ನು ಇದೇ ೯ರಂದು ಬೆಳಗ್ಗೆ ೧೦.೩೦ಕ್ಕೆ ಮಂಡ್ಯದ ಉದ್ಯೋಗ ವಿನಿಮಯ ಕಚೇರಿ ಆವರಣದಲ್ಲಿ ಆಯೋಜಿಸಲಾಗಿದೆ. ಮೇಳದಲ್ಲಿ ಒಟ್ಟು ಆರು ಸಂಸ್ಥೆಗಳು ಭಾಗವಹಿಸುತ್ತಿದ್ದು, ಯುವಕರು ಇದರ ಸದುಪಯೋಗ ಪಡೆದುಕೊಳ್ಳುವಂತೆ ಉದ್ಯೋಗ ವಿನಿಮಯ ಇಲಾಖೆಯ ಉಪನಿರ್ದೇಶಕರು ಮನವಿ ಮಾಡಿದ್ದಾರೆ.

೨. ಹಾವೇರಿ ಜಿಲ್ಲೆಯಲ್ಲಿ ಈ ಬಾರಿ ಆಗಸ್ಟ್ ೧೫ರಂದು ಸ್ವಾತಂತ್ರ್ಯೋತ್ಸವವನ್ನು ಅರ್ಥಪೂರ್ಣವಾಗಿ ಆಚರಿಸಲು ತಯಾರಿ ನಡೆಸಲಾಗುತ್ತಿದ್ದು, ಅಧಿಕಾರಿಗಳು ತಮಗೆ ವಹಿಸಿರುವ ಪೂರ್ವ ಸಿದ್ಧತಾ ಕೆಲಸಗಳನ್ನು ನಿಗದಿತ ದಿನಗೊಳಗೆ ಪೂರ್ಣಗೊಳಿಸಬೇಕೆಂದು ಹೆಚ್ಚುವರಿ ಜಿಲ್ಲಾಧಿಕಾರಿ ವೀರಮಲ್ಲಪ್ಪ ಪೂಜಾರ ಸೂಚಿಸಿದ್ದಾರೆ.

೩. ಆಗಸ್ಟ್ ೧೫ ರಂದು ಸ್ವಾತಂತ್ರ್ಯೋತ್ಸವ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸಲು ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳುವಂತೆ ದಾವಣಗೆರೆ ಜಿಲ್ಲಾಧಿಕಾರಿ ಡಾ.ಗಂಗಾಧರ ಸ್ವಾಮಿ ಜಿಲ್ಲಾಮಟ್ಟದ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಎಲ್ಲಾ ಸರ್ಕಾರಿ ಕಚೇರಿ, ಶಾಲಾ, ಕಾಲೇಜು, ಗ್ರಾಮ ಪಂಚಾಯಿತಿಗಳಲ್ಲಿ ಸ್ವಾತಂತ್ರ್ಯೋತ್ಸವ ಆಚರಿಸಬೇಕು. ಧ್ವಜ ಸಂಹಿತೆಯನ್ನು ಕಡ್ಡಾಯವಾಗಿ ಪಾಲನೆ ಮಾಡಬೇಕು. ಯಾವುದೇ ಕಾರಣಕ್ಕೂ ಪ್ಲಾಸ್ಟಿಕ್ ಧ್ವಜಗಳನ್ನು ಬಳಕೆ ಮಾಡಬಾರದು ಎಂದು ನಿರ್ದೇಶಿಸಿದ್ದಾರೆ.

**<><*<><>*><>**

ಕೇಳುಗರ ಗಮನಕ್ಕೆ...

ಫ್ರಾನ್ಸ್‌ನಲ್ಲಿ ನಡೆಯುತ್ತಿರುವ ಒಲಿಂಪಿಕ್ಸ್ ಕ್ರೀಡಾಕೂಟದ ಪ್ರಸಾರದ ಹಿನ್ನೆಲೆಯಲ್ಲಿ ಬೆಳಗ್ಗೆ ೭-೩೫ಕ್ಕೆ ಪ್ರಸಾರವಾಗುತ್ತಿದ್ದ ರಾಷ್ಟ್ರೀಯ ವಾರ್ತೆಗಳು ಇದೇ ತಿಂಗಳ ೧೧ರವರೆಗೆ ಬೆಳಗ್ಗೆ ೬ ಗಂಟೆ ೫ ನಿಮಿಷಕ್ಕೆ ಪ್ರಸಾರವಾಗಲಿದೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**